# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 161 |
| ಸದಸ್ಯರ ಹೆಸರು | : | ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 05-12-2023 |
| ಉತ್ತರಿಸುವವರು | : | ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ನಗರ ಪ್ರಾಧಿಕಾರದ ಮಹಾಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯಿಂದಾಗಿ 2017ರ ಪೂರ್ವದ ಭೂ ಪರಿವರ್ತಿತ ಹಾಗೂ ನಮೂನೆ-3 ರಂತೆ ಗುರುತಿಸಿರುವ ನಿವೇಶನಗಳನ್ನು ಹೊಂದಿರುವ ಖಾತೆದಾರರಿಗೆ ಹೊಸ ಮನೆ ನಿರ್ಮಾಣಕ್ಕಾಗಿ ಕಟ್ಟಡ ಪರವಾನಗಿ ದೊರೆಯದೆ ಮತ್ತು ಈಗಾಗಲೇ ವಾಸವಿರುವ ಮನೆಗಳ ನವೀಕರಣ ಅಥವಾ ವಿಸ್ತರಣೆಗೆ ಕೂಡ ಪರವಾನಗಿ ದೊರೆಯದೆ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| (ಆ) | ಬಂದಿದ್ದಲ್ಲಿ, ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಶೇಷ ಪ್ರಕರಣವೆಂದು ಪರಿಗಣಿಸಿ 2017ರ ಪೂರ್ವದಲ್ಲಿ ಕೃಷಿಯೇತರ ಉದ್ದೇಶಕ್ಕಾಗಿ ಭೂ ಪರಿವರ್ತಿತ ಆಸ್ತಿಗಳನ್ನು ಹೊಂದಿರುವವರಿಗೆ ಮಹಾಯೋಜನೆಯ ನಿಯಮಗಳನ್ನು ಅನ್ವಯಿಸದೆ ಈ ಹಿಂದಿನಂತೆ ನಿವೇಶನಗಳ ವಿನ್ಯಾಸ ನಕ್ಷೆಯನ್ನು ಅನುಮೋದಿಸಿ, ಅಧಿಕೃತ ನಿವೇಶನಗಳೆಂದು ಪರಿಗಣಿಸಿ, ಕಟ್ಟಡ ನಿರ್ಮಾಣಕ್ಕೆ ಅಗತ್ಯವಿರುವ ಕಟ್ಟಡ ಪರವಾನಗಿಯನ್ನು ನೀಡಲು ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ; | ಸರ್ಕಾರದ ಪತ್ರ ಸಂಖ್ಯೆ: ನಅಇ 319 ಮೈಅಪ್ರಾ 2022 (ಇ) ದಿನಾಂಕ: 22.12.2022ರ ಪತ್ರದಲ್ಲಿ ಮಹಾ ಯೋಜನೆಯಾಗುವವರೆಗೆ ತಾಂತ್ರಿಕ ಅಭಿಪ್ರಾಯ ಮತ್ತು ಕಟ್ಟಡ ಪರವಾನಗಿಗಳನ್ನು ಸ್ಥಳೀಯ ಸಂಸ್ಥೆಯಿಂದ ನಿಯಮಾನುಸಾರ ನೀಡಲು ಅನುಮತಿ ನೀಡಲಾಗಿದೆ.<br><br>ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: 23350 ಡಿಎಂಎ/121/ ಜೆಪಿಎಸ್/ 2017-18, ದಿನಾಂಕ: 05-01-2018ರಂತೆ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಭೂ-ಪರಿವರ್ತನೆ ಗೊಂಡಿರುವ ನಿವೇಶನಗಳಿಗೆ ನಗರ ಮತ್ತು ಗ್ರಾಮಾಂತರ ಯೋಜನಾ ಪ್ರಾಧಿಕಾರದಿಂದ ವಿನ್ಯಾಸ ನಕ್ಷೆಗೆ ಅನುಮೋದನೆಗೊಂಡಿರುವ ನಿವೇಶನಗಳಿಗೆ ಸ್ಥಳೀಯ ಸಂಸ್ಥೆಯಿಂದ ನಮೂನೆ-3 ಹಾಗೂ ಕಟ್ಟಡ ಪರವಾನಿಗೆಗೆ ಅನುಮೋದನೆ ನೀಡಲಾಗುತ್ತಿದೆ. |
| (ಇ) | ಯಾವ ಕಾಲಮಿತಿಯೊಳಗೆ ಸದರಿ ಸಮಸ್ಯೆ ಪರಿಹರಿಸುವ ಸಲುವಾಗಿ ಸರ್ಕಾರ ಸೂಕ್ತ ಆದೇಶ ಹೊರಡಿಸುವುದು? | ಅನ್ವಯಿಸುವುದಿಲ್ಲ. |

ಸಂಖ್ಯೆ: ನಅಇ 180 ಜಿಇಎಲ್ 2023(ಇ)

(ರಹೀಂಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು.